ಗರಿಷ್ಠ 30°c | ಕನಿಷ್ಠ 21°c

ನಾಳೆಯಿಂದ ಪುನರ್ ಪ್ರತಿಷ್ಠೆ, ಬ್ರಹ್ಮಕಲಶೋತ್ಸವ

ನಾಪೋಕ್ಲು: ಮಡಿಕೇರಿ ತಾಲೂಕಿನ ಅವಂದೂರು ಗ್ರಾಮದ ಗ್ರಾಮ ದೇವರಾದ ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಶ್ರೀ ದೇವರ ಬಿಂಬ ಪುನರ್‌ಪ್ರತಿಷ್ಠೆ, ಅಷ್ಟಬಂಧ ಬ್ರಹ್ಮಕಲಶೋತ್ಸವ ಧಾರ್ಮಿಕ ಕಾರ್ಯಕ್ರಮ ಮೇ 5ರಿಂದ 8ವರೆಗೆ ನಡೆಯಲಿದೆ. 8ರಂದು ನಡೆಯುವ ಧಾರ್ಮಿಕ ಸಭಾ ಕಾರ್ಯಕ್ರಮದಲ್ಲಿ ಹಾಸನದ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಮಾಣಿಲ ಶ್ರೀಧಾಮದ ಶ್ರೀ ಮೋಹನದಾಸ ಪರಮಹಂಸ ಸ್ವಾಮೀಜಿ ಆಶೀರ್ವಚನ ನೀಡುವರು. ಸಂಸದ ಕೃಷ್ಣದತ್ತ ಯದುವೀರ್‌ಒಡೆಯರ್, ಶಾಸಕ ಎ.ಎಸ್. ಪೊನ್ನಣ್ಣ, ವಿಧಾನ ಪರಿಷತ್ ಸದಸ್ಯ ಎಂ.ಪಿ. ಸುಜಾ ಕುಶಾಲಪ್ಪ, ಮಾಜಿ ಸಭಾಧ್ಯಕ್ಷ ಕೆ.ಜಿ. ಬೋಪಯ್ಯ, ಉದ್ಯಮಿ ಕೇಕಡ ನಂದ, ನಿವೃತ್ತ ಬ್ಯಾಂಕ್ ಅಧಿಕಾರಿ ಪೊನ್ನಚ್ಚನ ತಮ್ಮಯ್ಯ, ಡಿಸಿಸಿ ಬ್ಯಾಂಕ್‌ನ ನಿವೃತ್ತ ವ್ಯವಸ್ಥಾಪಕ ಪಟ್ಟಡ ದೇವಯ್ಯ, ಮಾಜಿ ದೇವ ತಕ್ಕರು ಬೆಳ್ಯನ ನಾಣಯ್ಯ, ಹಾಲಿ ದೇವ ತಕ್ಕರಾದ ಬೆಳ್ಯನ ವಾಸುದೇವ, ಅವಂದೂರು ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಕಡ್ಯದ ಸೋಮಣ್ಣ ಆಗಮಿಸಲಿದ್ದಾರೆಂದು ಜೀರ್ಣೋದ್ಧಾರ ಸಮಿತಿ ತಿಳಿಸಿದೆ.



ಸೋಮವಾರಪೇಟೆ ಸಮೀಪದ ತಣ್ಣೀರುಹಳ್ಳ ಗ್ರಾಮದಲ್ಲಿ ನಿರ್ಮಾಣಗೊಂಡ ಸಪರಿವಾರ ಶ್ರೀ ವೀರ ಭದ್ರೇಶ್ವರ ದೇವರ ಪ್ರತಿಷ್ಠಾಬಂಧ ಬ್ರಹ್ಮಕಲಶೋತ್ಸವ ಕಾರ್ಯಕ್ರಮದಲ್ಲಿ ದೇವಳಕ್ಕೆ ಸ್ಥಳ ದಾನ ಮಾಡಿದ ರಾಣಿ ನರೇಂದ್ರ, ನರೇಂದ್ರ ಹಾಗೂ ರವಿಶಂಕರ್ ಅವರನ್ನು ಶಾಸಕ ಡಾ. ಮಂತರ್‌ಗೌಡ ಸನ್ಮಾನಿಸಿದರು.



ಕಾಸರಗೋಡಿನ ಬೇಕಲ ಗೋಕುಲಂ ಗೋಶಾಲೆ ವೈಶಾಖ ನಟನಂ-2026 ನೃತ್ಯ ಸಮಾರಾಧನೆಯಲ್ಲಿ ಶಿವಪ್ರಣಾಮ್ ನೃತ್ಯ ಸಂಸ್ಥೆ ಕಿನ್ನಿಗೋಳಿಯ ನಿರ್ದೇಶಕಿ ಅನ್ನಪೂರ್ಣ ರಿತೇಶ್ ಅವರ ಶಿಷ್ಯರಾದ ರಿದ್ಧಿ ಹರೀಶ್ ಶೆಟ್ಟಿ ಮತ್ತು ಸ್ಪರ್ಶ ಶೆಟ್ಟಿ ನೃತ್ಯ ಪ್ರದರ್ಶನ ನೀಡಿದರು.

ಕೊಡವರಿಗೆ ಪ್ರತ್ಯೇಕ ಲೋಕಸಭೆ, ವಿಧಾನಸಭೆ ಕ್ಷೇತ್ರಕ್ಕೆ ಆಗ್ರಹ

ಸಿಎನ್‌ಸಿಯಿಂದ ಅಭಿಯಾನ ಆರಂಭ | ತಲಕಾವೇರಿಯಲ್ಲಿ ಧಾರ್ಮಿಕ ಪ್ರಾರ್ಥನೆ | ಮೇ 12ರಿಂದ 48 ಗಂಟೆಗಳ ಸತ್ಯಾಗ್ರಹ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ವಿವಿಧ ಬೇಡಿಕೆಗಳ ಕುರಿತು ಸರ್ಕಾರದ ಗಮನ ಸೆಳೆಯಲು ಕಾವೇರಿ ನದಿಯ ಉಗಮಸ್ಥಾನ ತಲಕಾವೇರಿಯಿಂದ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಭಾನುವಾರ ಅಭಿಯಾನವನ್ನು ಆರಂಭಿಸಿತು.

ಪ್ರಾಚೀನ ಕೊಡವ ಸಾಂಪ್ರದಾಯಿಕ ಆವಾಸ ಸ್ಥಾನದ ಪ್ರಾದೇಶಿಕ ಮಿತಿಯೊಳಗೆ ಪ್ರತ್ಯೇಕ ಕೊಡವ ಪಾರ್ಲಿಮೆಂಟ್ ಮತ್ತು ಅಸೆಂಬ್ಲಿ ಕ್ಷೇತ್ರಗಳ ಸ್ಥಾಪನೆ, ಅಥವಾ ಪರ್ಯಾಯವಾಗಿ ಸಿಕ್ಕಿಂನ ಬೌದ್ಧ ಸನ್ಯಾಸಿ ಸಮುದಾಯದ 'ಸಂಘ' ಚುನಾವಣಾ ಕ್ಷೇತ್ರದ ಮಾದರಿಯಲ್ಲಿ ಆದಿಮಸಂಜಾತ ಏಕ-ಜನಾಂಗೀಯ ಪ್ರಕೃತಿ ಆರಾಧಕ ಕೊಡವರಿಗಾಗಿ ಪ್ರತ್ಯೇಕ ಅಮೂರ್ತ ಕೊಡವ ಪಾರ್ಲಿಮೆಂಟ್ ಮತ್ತು ಅಸೆಂಬ್ಲಿ ಕ್ಷೇತ್ರಗಳನ್ನು ರಚಿಸುವುದು ಸೇರಿದಂತೆ ಹಲವು ಬೇಡಿಕೆ ಮುಂದಿರಿಸಲಾಗಿದೆ.

ಸಿಎನ್‌ಸಿ ಅಧ್ಯಕ್ಷ ಎನ್.ಯು. ನಾಚಪ್ಪ ಅವರ ನೇತೃತ್ವದಲ್ಲಿ ತಲಕಾವೇರಿಯಲ್ಲಿ ಧಾರ್ಮಿಕ ಪ್ರಾರ್ಥನೆ ಸಲ್ಲಿಸಿ ಕೊಡವರ ಸಾಂವಿಧಾನಿಕ ಉದ್ದೇಶಕ್ಕಾಗಿ ದೈವಿಕ ಆಶೀರ್ವಾದವನ್ನು ಕೋರಿದ ಸದಸ್ಯರು ಮಾನವ ಸರಪಳಿ ಮೂಲಕ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಸಿಎನ್‌ಸಿ ಬೇಡಿಕೆಗಳ ಕುರಿತು ಆಡಳಿತ ವ್ಯವಸ್ಥೆಯ ಗಮನ ಸೆಳೆಯಲು ಮೇ 12 ರಿಂದ 48 ಗಂಟೆಗಳ ಹಗಲು-ರಾತ್ರಿ ಶಾಂತಿಯುತ ಸತ್ಯಾಗ್ರಹವನ್ನು ನಡೆಸಲಾಗುವುದು ಎಂದು ಎನ್.ಯು. ನಾಚಪ್ಪ ತಿಳಿಸಿದರು.

ಎನ್‌ಡಿಎ ಸರ್ಕಾರ ರಾಜ್ಯಸಭಾ ಪ್ರಾತಿನಿಧ್ಯ ಸೇರಿದಂತೆ 1200 ಕ್ಕೂ ಹೆಚ್ಚು ಸದಸ್ಯರಿಗೆ ಸ್ಥಳಾವಕಾಶ ಕಲ್ಪಿಸಲು ಹೊಸ ಸಂಸತ್ತು ಅಂದರೆ ಸೆಂಟ್ರಲ್ ವಿಸ್ಟಾವನ್ನು ನಿರ್ಮಿಸಿದೆ. ಲೋಕಸಭೆಯಲ್ಲಿ 850 ಸದಸ್ಯರನ್ನು ಹೊಂದಲಿದೆ. ಸರಕಾರ ಜನಸಂಖ್ಯೆಯನ್ನು ಮಾತ್ರ ಮಾನದಂಡವಾಗಿ ಪರಿಗಣಿಸಬಾರದು. ಕ್ಷೇತ್ರ ಮರು ವಿಂಗಡಣೆಗೆ ಅಗತ್ಯವಿರುವ ಜನಸಂಖ್ಯೆಯ ಆಧಾರದಲ್ಲಿ ನಾವು ಸ್ಪರ್ಧಿಸಲು ಸಾಧ್ಯವಿಲ್ಲ. ವಿಲೀನದ ನಂತರ, ಕೊಡವ ಭೂಪ್ರದೇಶದಲ್ಲಿ ರಾಜ್ಯ ಪ್ರಾಯೋಜಿತ ಜನಸಂಖ್ಯಾ ಬದಲಾವಣೆಗಳು, ಕೊಡವರ ಜನಸಂಖ್ಯಾ ಕುಸಿತ ಮತ್ತು ಹೊರಗಿನವರ ಪುನರ್ವಸತಿ ನಡೆದಿರುವುದು ಆತಂಕಕಾರಿ ವಿಷಯವಾಗಿದೆ. ಬಹುಸಂಖ್ಯಾತ ಸಮುದಾಯದ ನಡುವೆ ಕೊಡವರು ಆಯ್ಕೆಯಾಗಲು ಸಾಧ್ಯವಿಲ್ಲ. ಒಂದು ವೇಳೆ ಆಯ್ಕೆಯಾದರೂ, ನಾವು ನಮ್ಮ ಸ್ವಾಭಿಮಾನದ ಧ್ವನಿಯನ್ನು ಎತ್ತಲು ಸಾಧ್ಯವಿಲ್ಲ ಮತ್ತು ಇತರರ ಇಚ್ಛೆಯಂತೆ ನಡೆಯಬೇಕಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೊಟ್ಟಂಗಡ ಸವಿತಾ ಗಿರೀಶ್, ಅಪ್ಪಾರಂಡ ನಂದಿನಿ ನಂಜಪ್ಪ, ಅರೆಯಡ ಸವಿತಾ ತಿಮ್ಮಯ್ಯ, ಅಪ್ಪಾರಂಡ ನೀರು ಸೋಮಕ್ಕ, ಕಲಿಯಂಡ ಪ್ರಕಾಶ್, ಅಳ್ಮಂಡ ಜೈ ಗಣಪತಿ, ಪಟ್ಟಮಾಡ ಕುಶ, ನಂದೇಟಿರ ರವಿ ಸುಬ್ಬಯ್ಯ, ಬೊಟ್ಟಂಗಡ ಗಿರೀಶ್ ಪೆಮ್ಮಯ್ಯ ಹಾಜರಿದ್ದರು.



ಕಾವೇರಿ ನದಿಯ ಉಗಮಸ್ಥಾನ ತಲಕಾವೇರಿಯಿಂದ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಅಭಿಯಾನವನ್ನು ಆರಂಭಿಸಿತು.

> **ಮುಂಬರುವ ಚುನಾವಣಾ ಕ್ಷೇತ್ರಗಳ ಮರು ವಿಂಗಡಣೆ ಪ್ರಕ್ರಿಯೆಯಲ್ಲಿ ಶೇ. 33 ರಷ್ಟು ಮಹಿಳಾ ಮೀಸಲಾತಿ ಮಸೂದೆಯಡಿ ಕೊಡವ ಮಹಿಳೆಯರಿಗೆ ಆಂತರಿಕ ಮೀಸಲಾತಿ ಕೋಟಾ ನೀಡಬೇಕು. 2027ರ ರಾಷ್ಟ್ರೀಯ ಜನಗಣತಿಯಲ್ಲಿ ಕೊಡವರಿಗಾಗಿ ಪ್ರತ್ಯೇಕ 'ಕೋಡ್ ಮತ್ತು ಕಾಲಂ' ಅನ್ನು ನಿಗದಿಪಡಿಸಬೇಕು. ಕೊಡವರಿಗೆ ಪ್ರತ್ಯೇಕ ಲೋಕಸಭೆ ಮತ್ತು ವಿಧಾನಸಭಾ ಕ್ಷೇತ್ರ ಘೋಷಿಸಬೇಕು ಎಂಬಿತ್ಯಾದಿ ಬೇಡಿಕೆಗಳ ಮನವಿ ಪತ್ರವನ್ನು ಭಾರತದ ರಾಷ್ಟ್ರಪತಿಗಳು, ಪ್ರಧಾನ ಮಂತ್ರಿಗಳು ಹಾಗೂ ಭಾರತದ ಮುಖ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿ ಕೊಡಲಾಗಿದೆ.**
>
> ■ **ಎನ್.ಯು. ನಾಚಪ್ಪ** ಸಿಎನ್‌ಸಿ ಅಧ್ಯಕ್ಷ

ಸುದ್ದಿ ಸಿಂಚನ

ವಿಕಲಚೇತನರ ಪುನರ್ವಸತಿ ಕೇಂದ್ರ ಆರಂಭಿಸಲು ಅರ್ಜಿ ಆಹ್ವಾನ

ಮಡಿಕೇರಿ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಕೊಡಗು ಜಿಲ್ಲೆಯಲ್ಲಿ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರವನ್ನು ಪ್ರಾರಂಭಿಸುವ ಸಲುವಾಗಿ ನೋಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಅರ್ಜಿಯನ್ನು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಡಿಕೇರಿ ಇಲ್ಲಿಂದ ಕಚೇರಿ ವೇಳೆಯಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಜೂ. 1ರೊಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಚೈನ್ ಗೇಟ್ ಹತ್ತಿರ, ಮೈಸೂರು ರಸ್ತೆ, ಮಡಿಕೇರಿ, ಕೊಡಗು ಜಿಲ್ಲೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಕಚೇರಿ ದೂರವಾಣಿ ಸಂಖ್ಯೆ 08272-295829ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

9ರಂದು ಅರಮನೆ ಚೌಡಿ ದೇವಿಗೆ ವಿಶೇಷ ಪೂಜೆ

ಸುಂಟಿಕೊಪ್ಪ: ಗರಗಂದೂರು ಗ್ರಾಮದಲ್ಲಿ ನೆಲೆನಿಂತಿರುವ ಅರಮನೆ ಚೌಡಿ ದೇವಿಯ ವಾರ್ಷಿಕೋತ್ಸವ ಮೇ 9ರಂದು ಬೆಳಿಗ್ಗೆ 10ರಿಂದ 3 ಗಂಟೆಯವರೆಗೆ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿವೆ ಎಂದು ಸಮಿತಿ ಅಧ್ಯಕ್ಷ ಜಿ.ಎಸ್. ಪ್ರಕಾಶ್ ತಿಳಿಸಿದ್ದಾರೆ.



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೊಡಗು ಜಿಲ್ಲಾ ನಿರ್ದೇಶಕರಾಗಿದ್ದ ಲೀಲಾವತಿ ಅವರಿಗೆ ವರ್ಗಾವಣೆಯಾಗಿದೆ. ಕಳೆದ ನಾಲ್ಕು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದ ಅವರು ಚನ್ನರಾಯಪಟ್ಟಣದ ಕೇಂದ್ರ ಕಚೇರಿಗೆ ವರ್ಗವಾಗಿದ್ದು, ಅವರ ಸ್ಥಾನಕ್ಕೆ ವಿಠಲ ಸಾಲಿಯಾನ್ ಅವರನ್ನು ನೇಮಕ ಮಾಡಲಾಗಿದೆ. ಲೀಲಾವತಿ ಅವರು ವಿಠಲ ಸಾಲಿಯಾನ್ ಅವರಿಗೆ ಅಧಿಕಾರ ಹಸ್ತಾಂತರಿಸಿದರು.

ವೈದ್ಯಕೀಯ ತಪಾಸಣೆ ಇಂದಿನ ಅಗತ್ಯ: ಪೊನ್ನಣ್ಣ

ಕೊಂಡಂಗೇರಿ ಶ್ರೀದೇವಿ ವೈದ್ಯಕೀಯ ಕೇಂದ್ರದಿಂದ ಆರೋಗ್ಯ ತಪಾಸಣೆ ಶಿಬಿರ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಮಡಿಕೇರಿ ತಾಲೂಕು ಕೊಂಡಂಗೇರಿ ಗ್ರಾಮಕ್ಕೆ ಶಾಸಕರಾದ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಭೇಟಿ ನೀಡಿದರು.

ಕೊಂಡಂಗೇರಿ ಗ್ರಾಮದಲ್ಲಿ ಶ್ರೀ ದೇವಿ ವೈದ್ಯಕೀಯ ಕೇಂದ್ರದ ವತಿಯಿಂದ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಶಿಬಿರ ಉದ್ಘಾಟಿಸಿ ಮಾತನಾಡಿದ ಶಾಸಕರು, ಆರೋಗ್ಯವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬ ನಾಗರಿಕರ ಇಂದಿನ ಅವಶ್ಯಕತೆಯಾಗಿದೆ. ಸಮಾಜದ ಬಡ ಜನರಿಗೆ ದುಬಾರಿ ಆಸ್ಪತ್ರೆಗೆ ತೆರಳಿ ವೈದ್ಯಕೀಯ ಚಿಕಿತ್ಸೆ ಹಾಗೂ ತಪಾಸಣೆ ಮಾಡಿಕೊಳ್ಳುವುದು ದುಸ್ತರ ಎಂದು ಮನಗಂಡು, ಸ್ಥಳೀಯ ಜನರ ಅನುಕೂಲತೆಗೆಂದು ಇಂತಹ ಶಿಬಿರಗಳನ್ನು ಏರ್ಪಡಿಸಲಾಗುತ್ತದೆ. ನಾಗರಿಕರು ಇದರ ಸದುಪಯೋಗ ಪಡೆದುಕೊಂಡು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಡಾಕ್ಟರ್ ಅಮೀನ್, ಗ್ರಾಮ ಪಂಚಾಯಿತಿ ಸದಸ್ಯ ಅಂದಾಯಿ, ಮಾಜಿ ಸದಸ್ಯರಾದ ಮೂಸಾನ್ ಕೆ.ಎಂ. ಸಾಧುಲಿ, ನೌಶಾದ್ ಅನಿಫ್ ಮುಂತಾದವರಿದ್ದರು.



ಶಿಬಿರದಲ್ಲಿ ಆರೋಗ್ಯ ತಪಾಸಣೆ ಮಾಡಿಕೊಂಡ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ

ಕಾಡಾನೆ ದಾಳಿ: ಅಡಕೆ ಗಿಡ ನಾಶ

ಹುದಿಕೇರಿ ಗ್ರಾಮದಲ್ಲಿ 50ಕ್ಕೂ ಅಧಿಕ ಅಡಕೆ ಗಿಡ ಧ್ವಂಸ

• **ಕನ್ನಡಪ್ರಭ ವಾರ್ತೆ** ವಿರಾಜಪೇಟೆ

ಕಾಡಾನೆಗಳ ಹಿಂಡು ಅಡಕೆ ತೋಟಕ್ಕೆ ದಾಳಿ ಮಾಡಿ ಅಡಕೆ ಗಿಡಗಳನ್ನು ನಾಶಪಡಿಸಿದ ಘಟನೆ ನೆಲ್ಯಹುದೀಕೇರಿ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ಸಿರಾಜೆ ಎಸ್ಟೇಟ್ ಮಾಲೀಕ ಚಂದ್ರಶೇಖರ್‌ಅವರ ತೋಟಕ್ಕೆ ಶನಿವಾರ ರಾತ್ರಿ ಹತ್ತಕ್ಕೂ ಅಧಿಕ ಕಾಡಾನೆಗಳು ಅಡಕೆ ತೋಟದಲ್ಲಿ ದಾಂಧಲೆ ಮಾಡಿದ್ದು, 50ಕ್ಕೂ ಅಧಿಕ ಅಡಕೆ ಗಿಡಗಳನ್ನು ನಾಶಪ ಡಿಸಿವೆ. ಇದರಿಂದ ಅಪಾರ ನಷ್ಟವಾಗಿದೆ.

ಈ ಕುರಿತು ಮಾಹಿತಿ ನೀಡಿದ ತೋಟದ ಮಾಲೀಕರ ಮಗ ಮೋಹನ್ ಗೌಡ, ಕಾಡಾನೆಗಳ ದಾಂಧಲೆಯಿಂದ ಅಪಾರ ನಷ್ಟ ಉಂಟಾಗಿದೆ. ಕಳೆದ ಐದಾರು ವರ್ಷಗಳಿಂದ ಈ ಭಾಗದಲ್ಲಿ ಕಾಡಾನೆಗಳು ನಿರಂತರವಾಗಿ ತೋಟಗಳಿಗೆ ಲಗ್ಗೆ ಇಟ್ಟು ಬೆಳೆ ನಾಶ ಪಡಿಸುತ್ತಿವೆ. ಕಳೆದ ವರ್ಷವೂ ಕಾಡಾನೆ ದಾಳಿಯಿಂದ ಬೆಳೆ ನಷ್ಟವಾಗಿದ್ದು, ಪರಿಹಾರಕ್ಕೆ ಅರ್ಜಿ ಸಲ್ಲಿಸಿ ಯಾವುದೇ ಪರಿಹಾರ ದೊರೆತಿಲ್ಲ ಎಂದು ಹೇಳಿದರು.

ಫಸಲಿನ ನಷ್ಟದಿಂದ ಈ ಭಾಗದ ಬೆಳೆಗಾರರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ತಮ್ಮ ಅಳಲು ತೋಡಿಕೊಂಡರು. ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಬೆಳೆ ನಷ್ಟ ಪರಿಹಾರ ಕೊಡಿಸಬೇಕಾಗಿ ಆಗ್ರಹಿಸಿದರು.



ಅಡಕೆ ಬೆಳೆ ನಾಶವಾಗಿರುವುದು.

ನಾಳೆ ಮಾದಾಪುರ ಕೊಡವ ಸಮಾಜದ ಸಮುದಾಯ ಭವನ ಲೋಕಾರ್ಪಣೆ

3.5 ಕೋಟಿ ರು. ವೆಚ್ಚದ ಕಾಮಗಾರಿ | ಇನ್ನೂ 1 ಕೋಟಿ ರು. ಮೌಲ್ಯದ ಕಾಮಗಾರಿ ಬಾಕಿ

• **ಕನ್ನಡಪ್ರಭ ವಾರ್ತೆ ಮಡಿಕೇರಿ**

ಮಾದಾಪುರದಲ್ಲಿನ ಕೊಡವ ಸಮಾಜದ ನೂತನ ಸಮುದಾಯ ಭವನದ ಉದ್ಘಾಟನೆ ಮೇ 5ರಂದು ನಡೆಯಲಿದೆ. ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ನೂತನವಾಗಿ ನಿರ್ಮಿಸಲಾದ ಸುಸಜ್ಜಿತ ಸಮುದಾಯ ಭವನವನ್ನು ಲೋಕಾರ್ಪಣೆ ಮಾಡುವರು ಎಂದು ಕೊಡವ ಸಮಾಜದ ಅಧ್ಯಕ್ಷ ಮಂಡೇಪಂಡ ಮನು ಮೇದಪ್ಪ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾದಾಪುರ ಕೊಡವ ಸಮಾಜ ಸಮುದಾಯ ಭವನದ ಬಗ್ಗೆ ಮಾಹಿತಿ ನೀಡಿದ ಅವರು, ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭ 1 ಕೋಟಿ ರು. ಅನುದಾನ ಈ ಉದ್ದೇಶಕ್ಕೆ ಬಿಡುಗಡೆಯಾಗಿತ್ತು. ಇದರಲ್ಲಿ 75 ಲಕ್ಷ ರು. ಅನುದಾನ ಬಿಡುಗಡೆಯಾಗಿದ್ದು 25 ಲಕ್ಷ ರು. ಅನುದಾನ ದೊರಕಬೇಕಾಗಿದೆ ಎಂದರು.

ಮಾಜಿ ಶಾಸಕ ಎಂ.ಪಿ. ಅಪ್ಪಚ್ಚು ರಂಜನ್, ಅವರ ವಿಶೇಷ ಪ್ರಯತ್ನದಿಂದ ಹಾಗೂ ಮಾಜಿ ಸಂಸದರು, ಮಾಜಿ ಶಾಸಕರ ಪ್ರಯತ್ನದಿಂದ ಸೂಕ್ತ ಅನುದಾನ ನೀಡಲ್ಪಟ್ಟಿತ್ತು. ಅನೇಕ ದಾನಿಗಳಿಂದಲೂ ಆರ್ಥಿಕ ಸಂಪನ್ಮೂಲ ಸಂಗ್ರಹವಾಗಿದೆ ಎಂದು ಸ್ಮರಿಸಿದ ಮೇದಪ್ಪ, ಶಾಸಕ ಡಾ. ಮಂತರ್‌ಗೌಡರು 10 ಲಕ್ಷ ರು. ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆಯನ್ನು ಸಮುದಾಯ ಭವನಕ್ಕೆ ನಿರ್ಮಿಸಲು ಒಪ್ಪಿದ್ದಾರೆ ಎಂದು ತಿಳಿಸಿದರು.

ಭವನವು 4.50 ಕೋಟಿ ರು. ವೆಚ್ಚದಲ್ಲಿ ನಿರ್ಮಾಣವಾಗಲಿದ್ದು, ಈವರೆಗೆ 3.50 ಕೋಟಿ ರು. ವೆಚ್ಚದ ಕಾಮಗಾರಿ ನಡೆದಿದ್ದು, ಇನ್ನೂ 1 ಕೋಟಿ ರು. ಮೌಲ್ಯದ ಕಾಮಗಾರಿ ಬಾಕಿ ಇದೆ. ಸಮುದಾಯ ಭವನಕ್ಕಾಗಿ 5 ಎಕರೆ ಜಾಗವನ್ನು ಮಾದಾಪುರ ಕೊಡವ ಸಮಾಜದಿಂದ ಖರೀದಿಸಲಾಗಿದ್ದು, ಇಲ್ಲಿ 1 ಸಾವಿರ ವಾಹನಗಳ ನಿಲುಗಡೆಗೆ ಅವಕಾಶವಿದೆ ಎಂದು ಮಾಹಿತಿ ನೀಡಿದರು.

ಮಾಜಿ ಸಚಿವ ಎಂ.ಪಿ. ಅಪ್ಪಚ್ಚು ರಂಜನ್ ಗೌರವಾಧ್ಯಕ್ಷರಾಗಿರುವ ಮಾದಾಪುರ ಕೊಡವ ಸಮಾಜದ ಉಪಾಧ್ಯಕ್ಷರಾಗಿ ಪಾಸುರ ಎನ್. ಉತ್ತಪ್ಪ, ಕಾರ್ಯದರ್ಶಿಯಾಗಿ ನಾಗಂಡ ಸಿ. ಕಾಳಪ್ಪ, ಖಜಾಂಚಿಯಾಗಿ ಮಚ್ಚಂಡ ಜಿ. ಬೋಪಣ್ಣ ಕಾರ್ಯನಿರ್ವಹಿಸುತ್ತಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾದಾಪುರ ಕೊಡವ ಸಮಾಜದ ಗೌರವ ಕಾರ್ಯದರ್ಶಿ ಐಚೆಟ್ಟಿರ ನಂಜಪ್ಪ, ನಿರ್ದೇಶಕರಾದ ನಾಪಂಡ ಉಮೇಶ್ ಉತ್ತಪ್ಪ, ಮಾಳೆಯಂಡ ಜೋಯಪ್ಪ ಉಪಸ್ಥಿತರಿದ್ದರು.

ಕಾಫಿ ಬೆಳೆಗಾರರಿಗೆ ಜಾಗೃತಿ ಕಾರ್ಯಕ್ರಮ

ಸಸ್ಯಗಳ ರೋಗನಿರೋಧಕ ಶಕ್ತಿ ಹೆಚ್ಚಳ ಭರವಸೆ



ಮಣ್ಣಿನ ಪೋಷಕಾಂಶದ ಬಗ್ಗೆ ಕಾರ್ಯಾಗಾರವನ್ನು ನಡೆಸಲಾಯಿತು.

• **ಕನ್ನಡಪ್ರಭ ವಾರ್ತೆ** ಗೋಣಿಕೊಪ್ಪ

ಇಲ್ಲಿನ ಕೃಷಿ ವಿಜ್ಞಾನ ಕೇಂದ್ರದಲ್ಲಿ ವೈಜ್ಞಾನಿಕ ಆಧರಿತ ಪೋಷಕಾಂಶ ಕುರಿತು ಕಾಫಿ ಬೆಳೆಗಾರರಿಗೆ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಭಾಗವಹಿಸಿದ 62 ಕಾಫಿ ಬೆಳೆಗಾರರಿಗೆ ಮತ್ತು ರೈತರಿಗೆ ವೈಜ್ಞಾನಿಕ ಆಧರಿತ ರಸಗೊಬ್ಬರ ಬಳಕೆಯ ಮಹತ್ವ, ಮಣ್ಣಿನ ಆರೋಗ್ಯ ಸುಧಾರಣೆ, ಸಸ್ಯಗಳ ರೋಗನಿರೋಧಕ ಶಕ್ತಿ ಹೆಚ್ಚಳ, ಉತ್ಪಾದಕತೆ ವೃದ್ಧಿ, ಆಮದು ಅವಲಂಬನೆ ಕಡಿತ ಮಾಡುವ ಬಗ್ಗೆ ತಜ್ಞರು ವಿವರಿಸಿದರು.

ವಿಶೇಷವಾಗಿ ಜೈವಿಕ ಗೊಬ್ಬರಗಳ ಬಳಕೆ ಮತ್ತು ವರ್ಮಿ ಕಂಪೋಸ್ಟ್, ಜೀವಾಮೃತ, ಪಂಚಗವ್ಯ, ನೀಂ ಕೇಕ್, ಹೊಂಗೆ ಕೇಕ್, ಟ್ರೈಕೋಡರ್ಮಾ ಇವುಗಳನ್ನು ಬಳಸಿ ಮಣ್ಣಿನ ಆರ್ಗಾನಿಕ್ ಕಾರ್ಬನ್, ಜೀವ ವೈವಿಧ್ಯತೆಯನ್ನು ಹೆಚ್ಚಿಸಬಹುದು ಎಂದು ತಿಳಿಸಲಾಯಿತು. ಪೊನ್ನಂಪೇಟೆ ತಾಲೂಕು ಸಹಾಯಕ ಕೃಷಿ ನಿರ್ದೇಶಕ ದೊರೈರಾಜ್, ಕೊಡಗು ಕೃಷಿ ಇನ್‌ಪುಟ್ ಡೀಲರ್ಸ್ ಸಂಘದ ಅಧ್ಯಕ್ಷ ನಂದ ಕುಮಾರ್, ಸೇರಿ ದಂತೆ ಕೇಂದ್ರದ ವಿಜ್ಞಾನಿಗಳು ಮತ್ತು ಸಿಬ್ಬಂದಿ ಇದ್ದರು.

ವ್ಯಕ್ತಿ ನಾಪತ್ತೆ: ದೂರು ದಾಖಲು

ಸುಂಟಿಕೊಪ್ಪ: ನಾಕೂರು ಶಿರಂಗಾಲ ಗ್ರಾಮದ ನಿವಾಸಿ ಶಶಿ ವಿ.ಎನ್. (42) ಎಂಬವರು ನಾಪತ್ತೆಯಾಗಿರುವ ಬಗ್ಗೆ ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಸುಂಟಿಕೊಪ್ಪ ಹೋಬಳಿ ವ್ಯಾಪ್ತಿಯ ನಾಕೂರು ಶಿರಂಗಾಲ ಗ್ರಾಮ ನಿವಾಸಿ ಶಶಿ ವಿ.ಎನ್. ಹಾಗೂ ಪತ್ನಿ ಮಧ್ಯೆ ಏ.20ರಂದು ಪರಸ್ಪರ ಜಗಳವಾಗಿದ್ದು, ನಂತರ ರಾತ್ರಿ ಸುಮಾರು 9 ಗಂಟೆಗೆ ಮನೆಯಿಂದ ಹೊರ ಹೋಗಿದ್ದರು. ಏ. 21ರಂದು ಹಗಲಿನಲ್ಲಿ ಬೆಂಗಳೂರಿನ ಮಂಗನಪಾಳ್ಯದಲ್ಲಿರುವ ಮಗಳ ಮಕ್ಕಳನ್ನು ಬೊಮ್ಮನಳ್ಳಿಯ ಬಸ್ ನಿಲ್ದಾಣಕ್ಕೆ ಬರುವಂತೆ ಸೂಚಿಸಿ ಅಲ್ಲೇ ಮಾತನಾಡಿಸಿ, ನನ್ನನ್ನು ಹುಡುಕಾಡಬೇಡಿ ಎಂಬುದಾಗಿ ಹೇಳಿ ಅಲ್ಲಿಂದ ಹೊರಟು ಹೋಗಿದ್ದಾರೆ. ಇಷ್ಟು ದಿನಗಳಾದರೂ ಮನೆಗೆ ಹಿಂತಿರುಗದಿರುವ ಹಿನ್ನೆಲೆಯಲ್ಲಿ ತಂದೆಯನ್ನು ಪತ್ತೆ ಹಚ್ಚಿಕೊಡುವಂತೆ ಅವರ ಪುತ್ರಿ ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಸನ್ಮಾನ

ಭಗತ್ ಸಿಂಗ್ ಹೆಸರಲ್ಲಿ ಸ ಮಾಜ ಸೇವೆ ಶ್ಲಾಘನೀಯ ಕಾರ್ಯಕ್ರಮ: ಪ್ರಮೋದ್ ಗಣಪತಿ

ಜೆಸಿಎಲ್ ಕ್ರಿಕೆಟ್ ಪಂದ್ಯಾಟದ ಬಿಡ್ಡಿಂಗ್ ಕಾರ್ಯಕ್ರಮಕ್ಕೆ ಚಾಲನೆ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಭಗತ್‌ಸಿಂಗ್ ಯುವಕ ಸಂಘ ಮೇ ತಿಂಗಳಲ್ಲಿ ನಡೆಸಲಿರುವ 6ನೇ ಆವೃತ್ತಿಯ ಜೆಸಿಎಲ್ ಕ್ರಿಕೆಟ್ ಪಂದ್ಯಾಟದ ಬಿಡ್ಡಿಂಗ್ ಕಾರ್ಯಕ್ರಮ ನಡೆಯಿತು.

ಗೋಣಿಕೊಪ್ಪ ಸ್ವಾತಂತ್ರ್ಯ ಹೋರಾಗಾರರ ಭವನದಲ್ಲಿ ಭಗತ್ ಸಿಂಗ್ ಯುವಕ ಸಂಘದ ಅಧ್ಯಕ್ಷ ಸತೀಶ್ ಸಿಂಗ್ ಅಧ್ಯಕ್ಷತೆಯಲ್ಲಿ ಹರಾಜು ಪ್ರಕ್ರಿಯೆ ನಡೆಯಿತು. ಕಾರ್ಯಕ್ರಮಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಪ್ರಮೋದ್ ಗಣಪತಿ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಭಗತ್ ಸಿಂಗ್ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ತನ್ನದೇ ಆದ ಹೋರಾಟದ ಮೂಲಕ ಗಮನ ಸೆಳೆದಿದ್ದಾರೆ. ಕೆಚ್ಚೆದೆಯ ವೀರ, ಹೋರಾಟಗಾರರ ಹೆಸರಿನಲ್ಲಿ ಸಂಘ ಸ್ಥಾಪಿಸುವ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟಗಾರರ ಭವನ ಸಂಚಾಲಕ ಕೊಳ್ಳಿಮಾಡ ಅಜಿತ್ ಅಯ್ಯಪ್ಪ ಮಾತನಾಡಿ, ದೇಶ ಸೇವೆ ಮಾಡಿರುವ ಮಹಾನ್ ವ್ಯಕ್ತಿಯ ಹೆಸರಿನಲ್ಲಿ ಸಂಘ ಕಾರ್ಯ ನಿರ್ವಹಣೆ ಮಾಡುತ್ತಿರುವುದು ಬಹಳ ಹೆಮ್ಮೆಯ ವಿಚಾರ ಎಂದರು.

ಸಾಹಿತಿ, ಕವಿ, ಜಗದೀಶ್ ಜೋಡುಬೀಟಿ ಮಾತನಾಡಿ, ಕ್ರೀಡೆಗಿಂತ ದೊಡ್ಡ ಆಧ್ಯಾತ್ಮ ಮತ್ತು ಧ್ಯಾನ ಮತ್ತೊಂದಿಲ್ಲ. ಕ್ರೀಡಾಕೂಟದಲ್ಲಿ ಭಾಗವಹಿಸುವ ಮೂಲಕ ಬಲಿಷ್ಠ ಭಾರತವನ್ನು ಕಟ್ಟಬೇಕಾಗಿದೆ ಎಂದು ಹೇಳಿದರು.

ಸುಮಾರು 16 ತಂಡಗಳು, 200ಕ್ಕೂ ಹೆಚ್ಚು ಕ್ರೀಡಾಪಟುಗಳು ಹರಾಜು ಪ್ರಕ್ರಿಯೆ ಯಲ್ಲಿ ಭಾಗವಹಿಸಿದ್ದಾರೆಂದು ಮಾಹಿತಿ ನೀಡಿದರು.

ಸಮಾಜಸೇವೆಯಲ್ಲಿ ತೊಡಗಿಸಿಕೊಂಡ ಪತ್ರಕರ್ತ ವಿ.ವಿ ಅರುಣ್ ಕುಮಾರ್, ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿದ ಶಿಕ್ಷಕಿ ಜಯಶ್ರೀ, ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪಡೆದ ಮಹಿಳಾ ಸಾದಕಿ ಕುಸುಮ ಪಡಿಕಲ್, ಸಮಾಜ ಸೇವಕ ಪೂವಯ್ಯ, ಮರ್ಚೆಂಟ್ ಬ್ಯಾಂಕ್ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಕಾರ್ತಿಕ್ ಮತ್ತು ಫುಟ್ಬಾಲ್ ಆಟಗಾರ ದೈವಿಕ್ ಸೋಮಯ್ಯ ಇವರನ್ನು ಸನ್ಮಾನಿಸಲಾಯಿತು.

ಭಗತ್ ಸಿಂಗ್ ಯುವಕ ಸಂಘದ ಕ್ರೀಡಾ ಸಂಚಾಲಕ ಸಂತೋಷ್ ಪಿಟ್ಟೆ, ಮರ್ಚೆಂಟ್ ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕಾರ್ತಿಕ್, ಸರ್ವದೈವತ ಶಾಲೆಯ ಮುಖ್ಯ ಶಿಕ್ಷಕಿ ಮನೆಯಪಂಡ ಶೀಲಾ ಬೋಪ್ಪಣ್ಣ ಮತ್ತಿತರರು ಇದ್ದರು.



ಕಾರ್ಯಕ್ರಮದಲ್ಲಿ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

> **ಮೇ 14, 15, 16 ಮತ್ತು 17ರಂದು ಗೋಣಿಕೊಪ್ಪಲು ಚಾಂಪಿಯನ್ಸ್ ಲೀಗ್ ಕ್ರಿಕೆಟ್ ಪಂದ್ಯಾಟ ಆರನೇ ವರ್ಷದಲ್ಲಿ ನಡೆಯಲಿದೆ.**
>
> ■ **ಸತೀಶ್ ಸಿಂಗ್** ಭಗತ್‌ಸಿಂಗ್ ಯುವಕ ಸಂಘದ ಅಧ್ಯಕ್ಷ

■ ಪ್ರಥಮ ಬಹುಮಾನವಾಗಿ 1,11111 ರು.ಪಾಯಿಗಳನ್ನು ಮತ್ತು ದ್ವಿತೀಯ ಬಹುಮಾನವಾಗಿ 50555, ತೃತೀಯ ಬಹುಮಾನ 6666, ಮತ್ತು ನಾಲ್ಕನೇ ಬಹುಮಾನವನ್ನ 3333 ವಿಜೇತ ತಂಡಗಳಿಗೆ ನೀಡಲಾಗುತ್ತಿದೆ.

ಸುದ್ದಿ ಸಿಂಚನ

10,11ರಂದು ಐಗೂರು ಶ್ರೀ ಮುತ್ತಪ್ಪ ದೇವರ ವಾರ್ಷಿಕ ಮಹೋತ್ಸವ

ಸುಂಟಿಕೊಪ್ಪ: ಐಗೂರು ಗ್ರಾಮದಲ್ಲಿ ನೆಲೆ ನಿಂತಿರುವ ಶ್ರೀ.ಮುತ್ತಪ್ಪ ದೇವರ ವಾರ್ಷಿಕ ಮಹೋತ್ಸವ ಹಾಗೂ ಪರಿವಾರ ದೈವಗಳ ಕೋಲಗಳನ್ನು ಮೇ 10, 11ರಂದು ವಿಜೃಂಭಣೆಯಿಂದ ಆಯೋಜಿಸಲು ಆಡಳಿತ ಮಂಡಳಿ ವತಿಯಿಂದ ಸಿದ್ಧತೆ ನಡೆದಿದೆ. ಮೇ 10ರಂದು ಬೆಳಿಗ್ಗೆ 8ಕ್ಕೆ ಗಣಹೋಮ, ಸಂಜೆ 4ಕ್ಕೆ ಮಲೆಯರಕ್ಕಲ್ ಮತ್ತು ಮುತ್ತಪ್ಪ ಬೆಳ್ಳಾಟ, ಸಂಜೆ 5ಕ್ಕೆ ಗುಳಿಗಪ್ಪ ದೇವಾಲಯದಿಂದ ಚೆಂಡೆ ಮೇಳ, ಪೂರ್ಣಕುಂಭ ಕಲಶದೊಂದಿಗೆ ಮೆರವಣಿಗೆ ಮೂಲಕ ಮುತ್ತಪ್ಪ ದೇವಾಲಯಕ್ಕೆ ಬರಲಿದೆ. ಸಂಜೆ 6.30ಕ್ಕೆ ತಿರುವಪ್ಪ ಬೆಳ್ಳಟಂ, ರಾತ್ರಿ 8ಕ್ಕೆ ಕುಟ್ಟಚೇತ ಬೆಳ್ಳಾಟ, ರಾತ್ರಿ 10ಕ್ಕೆ ಗುಳಿಗನ ಬೆಳ್ಳಾಟ, 11ಕ್ಕೆ ಕಳಿಕಾಪಟ್, 12ಕ್ಕೆ ಪೊದಿ ವೆಳ್ಳಾಟಂ ಹಾಗೂ ಕಲಶದ ಆಗಮನ ಆಗಲಿದೆ. ರಾತ್ರಿ 8.30ಕ್ಕೆ ಅನ್ನ ಸಂತರ್ಪಣೆ ನಡೆಯಲಿದೆ. ಮೇ 11ರಂದು ಬೆಳಗಿನ ಜಾವ 3ಕ್ಕೆಗುಳಿಗನ ಕೋಲ, 5ಕ್ಕೆ ಮುತ್ತಪ್ಪ ದೈವದ ಕೋಲ, 5.30ಕ್ಕೆತಿರುವಪ್ಪನ ಕೋಲ, 6ಕ್ಕೆ ಕುಟ್ಟಿಚೇತನ್ ಕೋಲ, 9 ಕ್ಕೆಪೋದಿಕೋಲ, ಬೆಳಗ್ಗೆ 11.30ಕ್ಕೆ ಗುರುಶ್ರೀ ದರ್ಪಣ ನಡೆಯಲಿದೆ ಎಂದು ಆಡಳಿತ ಮಂಡಳಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾ.ಪಂ.ಸದಸ್ಯ ಸ್ಥಾನಗಳ ನಿಗದಿ: ಆಕ್ಷೇಪಣೆ ವಿಸ್ತರಣೆ

ಮಂಗಳೂರು: ಕರ್ನಾಟಕ ರಾಜ್ಯದ ಗ್ರಾಮ ಪಂಚಾಯತ್‌ಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿ ಏ.18 ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಹೊರಡಿಸಲಾದ ಕರಡು ಪ್ರಕಟಣೆಗೆ ಸಾರ್ವಜನಿಕರು ಆಕ್ಷೇಪಣೆಯನ್ನು ಸಲ್ಲಿಸುವ ಅವಧಿಯನ್ನು ಮೇ 2ರ ಸಂಜೆ 5.30ರವರೆಗೆ ವಿಸ್ತರಿಸಲಾಗಿದೆ. ಈಗಾಗಲೇ ಸ್ವೀಕರಿಸಿದ ಆಕ್ಷೇಪಣೆ/ಅಹವಾಲುಗಳ ಬಗ್ಗೆ ನಿಗದಿಪಡಿಸಿದ ಏ.27ರ ಪರಿಶೀಲನಾ ಅದಾಲತನ್ನು ಮುಂದೂಡಲಾಗಿದೆ. **ಪರಿಶೀಲನಾ ಅದಾಲತ್‌ನ ವೇಳಾಪಟ್ಟಿ:** ಮೇ 5 ರಂದು ಬೆಳಿಗ್ಗೆ 11ರಿಂದ ಮಧ್ಯಾಹ್ನ 1.30 ರವರೆಗೆ ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ಬೆಳಗಾವಿ, ಧಾರವಾಡ, ಬಾಗಲಕೋಟೆ, ಗದಗ, ವಿಜಯಪುರ, ಹಾವೇರಿ ಮತ್ತು ಉತ್ತರಕನ್ನಡ ಜಿಲ್ಲೆ ಭಾಗವಹಿಸಬಹುದು. ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ದಕ್ಷಿಣ, ತುಮಕೂರು, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಮೈಸೂರು, ಮಂಡ್ಯ, ಹಾಸನ, ಕೊಡಗು, ಚಿಕ್ಕಮಗಳೂರು, ಚಾಮರಾಜನಗರ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು ಭಾಗವಹಿಸಬಹುದು. ಅದಾಲತ್ ಬೆಂಗಳೂರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 2 ನೇ ಮಹಡಿಯಲ್ಲಿ ನಡೆಯಲಿದೆ. ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಅದಾಲತ್‌ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ತಮ್ಮ ಆಧಾರ್‌ಅಥವಾ ಗುರುತಿನ ಚೀಟಿ ಅಥವಾ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ಕಡ್ಡಾಯವಾಗಿ ತರಬೇಕು ಎಂದು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಪ್ರಯಾಣಿಕರಿಗೆ ಎಲ್ಲ ಸೌಲಭ್ಯ: ಅಕ್ರಂ ಪಾಷಾ ಭರವಸೆ

ಕುಶಾಲನಗರ: ಕೆಎಸ್‌ಆರ್‌ಟಿಸಿ ನೂತನ ಘಟಕದ ಕಾಮಗಾರಿ ವೀಕ್ಷಣೆ

• **ಕನ್ನಡಪ್ರಭ ವಾರ್ತೆ** ಕುಶಾಲನಗರ

ಮುಂದಿನ ದಿನಗಳಲ್ಲಿ ಕುಶಾಲನಗರ ಪಟ್ಟಣ ಟ್ರಾನ್ ಸ್ಪೋರ್ಟ್ ಹಬ್ ಆಗಿ ಪರಿವರ್ತನೆಯಾಗಲಿದ್ದು, ಕೆ ಎಸ್ ಆರ್‌ಟಿ ಸಿ ಸಂಸ್ಥೆಯ ಪ್ರಯಾಣಿಕರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಲು ಚಿಂತಿಸಲಾಗಿದೆ ಎಂದು ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂ ಪಾಷಾ ತಿಳಿಸಿದ್ದಾರೆ.

ಅವರು ಕುಶಾಲನಗರದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಕೆ ಎಸ್ ಆರ್‌ಟಿ ಸಿ ಘಟಕದ ಕಾಮಗಾರಿ ವೀಕ್ಷಿಸಿದ ಸುದ್ದಿಗಾರರೊಂದಿಗೆ ಮಾತನಾಡಿದರು.

ಮೈಸೂರು ಕಡೆಯಿಂದ ಕುಶಾಲನಗರದ ಕಡೆಗೆ ಚತುಷ್ಪಥ ರಸ್ತೆ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಡೆಯುತ್ತಿದ್ದು ಅತಿ ವೇಗವಾಗಿ ಜಿಲ್ಲೆಯ ಪ್ರಗತಿ ಸಾಗುತ್ತಿದೆ. ಕುಶಾಲನಗರ ನೂತನ ಘಟಕ ಸದ್ಯದಲ್ಲಿಯೇ ಲೋಕಾರ್ಪಣೆಗೊಳಲಿದ್ದು ಕುಶಾಲನಗರ ಗ್ರಾಮೀಣ ವ್ಯಾಪ್ತಿಯಲ್ಲಿ ಹೆಚ್ಚಿನ ಬಸ್ ಸೌಲಭ್ಯ ಅಂತರ್‌ರಾಜ್ಯ ಬಸ್ ಸಂಚಾರಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದರು.

ಕುಶಾಲನಗರದಲ್ಲಿ ಸಂಸ್ಥೆಯ ಪ್ರಾದೇಶಿಕ ಕಾರ್ಯಾಗಾರ ನಿರ್ಮಿಸುವ ಬಗ್ಗೆ ಕೂಡ ಚಿಂತನೆ ಹೊಂದಲಾಗಿದೆ, ವಿರಾಜಪೇಟೆಯಲ್ಲಿ ಬಸ್ ನಿಲ್ದಾಣ ಅಭಿವೃದ್ಧಿಯೊಂದಿಗೆ ನೂತನ ಘಟಕ ಸ್ಥಾಪನೆ ಆಗಲಿದೆ ಎಂದ ಅಕ್ರಮ್ ಪಾಷಾ ಈಗಾಗಲೇ ಕುಶಾಲನಗರ ಘಟಕಕ್ಕೆ ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ನೂತನ ಘಟಕದಲ್ಲಿ ಎಲೆಕ್ಟ್ರಿಕ್ ಬಸ್ಸುಗಳ ಚಾರ್ಜಿಂಗ್ ವ್ಯವಸ್ಥೆಗೆ ಸೌಲಭ್ಯ ಕಲ್ಪಿಸಲಾಗಿದೆ.



ಕುಶಾಲನಗರ ನೂತನ ಡಿಪೋ ಕಾಮಗಾರಿ ವೀಕ್ಷಣೆ ಮಾಡಿದ ಕೆ ಎಸ್ ಆರ್‌ಟಿ ಸಿ ವ್ಯವಸ್ಥಾಪಕ ನಿರ್ದೇಶಕರು

■ ಮುಂದಿನ ದಿನಗಳಲ್ಲಿ ಕುಶಾಲನಗರ ಪಟ್ಟಣ ಟ್ರಾನ್‌ಸ್ಪೋರ್ಟ್ ಹಬ್ ಆಗಿ ಪರಿವರ್ತನೆಯಾಗಲಿದ್ದು, ಕೆ ಎಸ್ ಆರ್‌ಟಿ ಸಿ ಸಂಸ್ಥೆಯ ಪ್ರಯಾಣಿಕರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಲು ಚಿಂತಿಸಲಾಗಿದೆ ಎಂದು ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂ ಪಾಷಾ ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿ ಕೊಡಗು ಜಿಲ್ಲೆಯಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿ ತೆರೆಯಲು ಚಿಂತನೆ ಹರಿಸಲಾಗುವುದು ಎಂದರು.

ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಅಧಿಕಾರಿ ಹರಿಬಾಬು, ಜಯಶಾಂತ ಕುಮಾರ್, ವೆಂಕಟೇಶ್, ರಂಗರಾಜ್ ಮಂಜುನಾಥ್, ಗುತ್ತಿಗೆದಾರ ಚಂದ್ರೇಗೌಡ, ಯೋಜನಾ ಇಂಜಿನಿಯರ್‌ಪವನ್ ಮತ್ತಿತರರು ಇದ್ದರು.

ನಗರ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಆಹ್ವಾನ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಪಂಗಳಲ್ಲಿ ಯುಆರ್‌ಡಬ್ಲ್ಯೂ / ವಿಆರ್‌ಡಬ್ಲ್ಯೂ ಹುದ್ದೆಗಳು ಖಾಲಿ ಇದ್ದು, ಬೌದ್ಧಿಕ ವಿಕಲತೆ ಹಾಗೂ ಮಾನಸಿಕ ಅಸ್ವಸ್ಥರನ್ನು ಹೊರತುಪಡಿಸಿ ಇತರರು ಮೇ 30ರೊಳಗೆ ಅರ್ಜಿ ಸಲ್ಲಿಸಬಹುದು.

ನಗರ ಪುನರ್ವಸತಿ ಕಾರ್ಯಕರ್ತರು (ಯುಆರ್‌ಡಬ್ಲ್ಯೂ) ಹುದ್ದೆಗೆ ಮಾಸಿಕ ಗೌರವ ಧನ 10 ಸಾವಿರ ರು., ಎಸ್ಸೆಸ್ಸೆಲ್ಸಿ ಉತ್ತೀರ್ಣ, ಅನುತ್ತೀರ್ಣ, ವಿಕಲತೆಯ ಪ್ರಮಾಣ ಶೇ. 40ಕ್ಕಿಂತ ಮೇಲ್ಪಟ್ಟು ಶೇ.75ಕ್ಕಿಂತ ಕಡಿಮೆ ಇರಬೇಕು. 18ರಿಂದ 45 ವರ್ಷದ ವಯೋಮಾನ ದವರಾಗಿರಬೇಕು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (ವಿಆರ್‌ಡಬ್ಲ್ಯೂ) ಹುದ್ದೆಗೆ ಮಾಸಿಕ ಗೌರವ ಧನ 10 ಸಾವಿರ, ಎಸ್ಸೆಸ್ಸೆಲ್ಸಿ ಉತ್ತೀರ್ಣ / ಅನುತ್ತೀರ್ಣ, ವಿಕಲತೆಯ ಪ್ರಮಾಣ ಶೇ. 40ಕ್ಕಿಂತ ಮೇಲ್ಪಟ್ಟು ಶೇ. 75ಕ್ಕಿಂತ ಕಡಿಮೆ ಇರಬೇಕು. 18 ರಿಂದ 45 ವರ್ಷದ ವಯೋಮಾನದವರಾಗಿರಬೇಕು.

ಯುಆರ್‌ಡಬ್ಲ್ಯುಹುದ್ದೆಗಳು ನಗರಸಭೆ ಮಡಿಕೇರಿ, ಸೋಮವಾರಪೇಟೆ ಪಟ್ಟಣ ಪಂಚಾಯಿತಿ ಹಾಗೂ ವಿಆರ್‌ಡಬ್ಲ್ಯು ಹುದ್ದೆಗಳು ಮಡಿಕೇರಿ ತಾಲೂಕಿನ ಹಾಕತ್ತೂರು, ಸೋಮವಾರಪೇಟೆ ತಾಲೂಕಿನ ಆಲೂರು ಸಿದ್ದಾಪುರ ಹಾಗೂ ವಿರಾಜಪೇಟೆ ತಾಲ್ಲೂಕಿನ ಪೊನ್ನಪ್ಪಸಂತೆ, ಕೆ. ಬಾಡಗ, ಕಿರುಗೂರು, ಕಾನೂರು, ಶ್ರೀಮಂಗಲದಲ್ಲಿ ಖಾಲಿ ಇರುತ್ತದೆ. ಅರ್ಜಿ ನಮೂನೆಗಳನ್ನು ಸಂಬಂಧಿಸಿದ ತಾಲೂಕು ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಂಆರ್‌ಡಬ್ ಲ್ಯೂಗಳಿಂದ ಪಡೆದು ನಿಗದಿತ ದಿನಾಂಕದೊಳಗೆ ಭರ್ತಿ ಮಾಡಿದ ಅರ್ಜಿಯನ್ನು ಕಚೇರಿಗೆ ಅಥವಾ ಎಂಆರ್ ಡಬ್‌ಲ್ಯೂಗಳಿಗೆ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸೋಮವಾರಪೇಟೆ ಹಾಗೂ ಕುಶಾಲನಗರ ತಾಲೂಕಿನವರು ಹರೀಶ್ ಟಿ.ಆರ್. ಮೊ. ಸಂ.8861428931, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನವರು ಪ್ರಥನ್ ಕುಮಾರ್‌ಸಿ.ಬಿ. ಮೊ.ಸಂ.9900883654 ಹಾಗೂ ಮಡಿಕೇರಿ ತಾಲೂಕಿನವರು ರಾಜೇಶ್. ಮೊ.ಸಂ.8073192914ನ್ನು ಹಾಗೂ ಕಚೇರಿ ದೂ.ಸಂ. 08272-295829ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

■ **ಮಾಹಿತಿಗೆ ಸೋಮವಾರಪೇಟೆ ಹಾಗೂ ಕುಶಾಲನಗರ ತಾಲೂಕಿನವರು ಹರೀಶ್ ಟಿ.ಆರ್. ಮೊ.ಸಂ.8861428931, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನವರು ಪ್ರಥನ್ ಕುಮಾರ್‌ಸಿ.ಬಿ. ಮೊ. ಸಂ.9900883654 ಹಾಗೂ ಮಡಿಕೇರಿ ತಾಲೂಕಿನವರು ರಾಜೇಶ್ 8073192914ನ್ನು ಹಾಗೂ ಕಚೇರಿ ದೂ.ಸಂ. 08272-295829 ಸಂಪರ್ಕಿಸಬಹುದು.**

ಸಂಜೀವಿನಿ ಒಕ್ಕೂಟ ಮಾಹಿತಿ ಕಾರ್ಯಾಗಾರ



ಹಾಕತ್ತೂರು ಗ್ರಾಮ ಪಂಚಾಯಿತಿ ಮಟ್ಟದ ಸಂಜೀವಿನಿ ಒಕ್ಕೂಟದ ಆಹಾರ, ಪೋಷಣೆ, ಆರೋಗ್ಯ, ನೀರು ಮತ್ತು ನೈರ್ಮಲ್ಯ ಹಾಗೂ ಕ್ಷಯರೋಗ ನಿರ್ಮೂಲನ ಮಾಹಿತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

• **ಕನ್ನಡಪ್ರಭ ವಾರ್ತೆ** ನಾಪೋಕ್ಲು

ಹಾಕತ್ತೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಯಲ್ಲಿ ಹಾಕತ್ತೂರು ಗ್ರಾಮ ಪಂಚಾಯಿತಿ ಮಟ್ಟದ ಸಂಜೀವಿನಿ ಒಕ್ಕೂಟದ ಆಹಾರ, ಪೋಷಣೆ, ಆರೋಗ್ಯ, ನೀರು ಮತ್ತು ನೈರ್ಮಲ್ಯ ಹಾಗೂ ಕ್ಷಯರೋಗ ನಿರ್ಮೂಲನ ಮಾಹಿತಿ ಕಾರ್ಯಾಗಾರ ಹಮ್ಮಿಕೊಳ್ಳಲಾಯಿತು.

ಮಡಿಕೇರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ನಿರ್ಮಲ ಅಧ್ಯಕ್ಷತೆ ವಹಿಸಿದ್ದರು. ಶಾಲೆಯ ಮುಖ್ಯ ಶಿಕ್ಷಕರಾದ ಕುಮಾರಸ್ವಾಮಿ ಟಿ. ಬಿ., ಎನ್, ಎಸ್,ಎಸ್ ಘಟಕದ ಶಿಬಿರಾಧಿಕಾರಿ ವೇಣುಗೋಪಾಲ್, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಶಿಲ್ಪ, ಆಶಾ ಕಾರ್ಯಕರ್ತೆಯರಾದ ಸುನಿತಾ ಮತ್ತು ಯಶೋಧ ಇದ್ದರು.

ಮಡಿಕೇರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬೇಸಿಗೆ ಶಿಬಿರದ ವಿದ್ಯಾರ್ಥಿಗಳು ಹಾಜರಿದ್ದರು. ಸೌಮ್ಯ ಸ್ವಾಗತಿಸಿದರು. ಹರಿಣಿ ನಿರೂಪಿಸಿ ವಂದಿಸಿದರು.

ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ವತಿಯಿಂದ ಮನ್ನಣೆ

ಎಂಆರ್‌ಪಿಎಲ್‌ಗೆ ಕೇಂದ್ರ 'ಸ್ವಚ್ಛತಾ ಪಕ್ವಾಡ' ಪ್ರಶಸ್ತಿ

• **ಕನ್ನಡಪ್ರಭ ವಾರ್ತೆ ಮಂಗಳೂರು**

ಎಂಆರ್‌ಪಿಎಲ್ ಸಂಸ್ಥೆಗೆ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ವತಿಯಿಂದ 'ಸ್ವಚ್ಛತಾ ಪಕ್ವಾಡ' ಪ್ರಶಸ್ತಿಗಳು ಲಭಿಸಿವೆ.

2023 ಮತ್ತು 2024ನೇ ಸಾಲಿನ ಸ್ವಚ್ಛತಾ ಪಕ್ವಾಡ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಎಂಆರ್‌ಪಿಎಲ್ 2023ರಲ್ಲಿ 'ಕ್ಯಾಟಗರಿ' ವಿಭಾಗದಲ್ಲಿ ದ್ವಿತೀಯ ಬಹುಮಾನ ಪಡೆದಿದ್ದರೆ, 2024ರಲ್ಲಿ ಸಮಾಧಾನಕರ ಬಹುಮಾನ ಗಳಿಸಿದೆ.

ಸಂಸ್ಥೆಯ ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳಿಗೆ ಸಚಿವಾಲಯ ಮೆಚ್ಚುಗೆ ವ್ಯಕ್ತಪಡಿಸಿದೆ. 2022ರಲ್ಲಿ ಎಂಆರ್‌ಪಿಎಲ್ ನಾಲ್ಕನೇ ಬಹುಮಾನವನ್ನು ಪಡೆದಿತ್ತು.

2026 ಏಪ್ರಿಲ್ 28ರಂದು ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಎಂಆರ್‌ಪಿಎಲ್ ಪರವಾಗಿ ಚಂದರ್‌ಮಣಿ (ಜಿಜಿಎಂ), ಪ್ಯಾಟ್ರಿಕ್ ರಾಜೇಶ್ ಮಿನ್ಜ್ (ಜಿಎಂಎಚ್ ಆರ್) ಹಾಗೂ ಎ.ಕೆ. ಮಿಶ್ರಾ (ಸೀನಿಯರ್ ಮೆನೇಜರ್) ಅವರು ಪ್ರಶಸ್ತಿ ಸ್ವೀಕರಿಸಿದರು. ಪ್ರತಿ ವರ್ಷ ಜುಲೈ 1ರಿಂದ 15ರವರೆಗೆ ನಡೆಯುವ 'ಸ್ವಚ್ಛತಾ ಪಕ್ವಾಡ' ಅಭಿಯಾನ ನಡೆಸುತ್ತಿದೆ.



ಎಂಆರ್‌ಪಿಎಲ್‌ಗೆ ಕೇಂದ್ರ 'ಸ್ವಚ್ಛತಾ ಪಕ್ವಾಡ' ಪ್ರಶಸ್ತಿ

ಮೂಡುಬಿದಿರೆ ಕೆಸರ್‌ಗದ್ದೆ: ಆರೋಗ್ಯ ತಪಾಸಣಾ ಉಚಿತ ಶಿಬಿರ

• **ಕನ್ನಡಪ್ರಭ ವಾರ್ತೆ** ಮೂಡುಬಿದಿರೆ

ಇಲ್ಲಿನ ಕೆಸರ್‌ಗದ್ದೆಯ ಸುನಂದಾ ಮಾಧವ ಪ್ರಭು ಸಭಾ ಭವನದಲ್ಲಿ ಶ್ರೀ ರಾಮ ಭಜನಾ ಮಂದಿರ ಕೆಸರುಗದ್ದೆ, ಮಿಜಾರು ಆಳ್ವಾಸ್ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನ ಕಾಲೇಜು ಮತ್ತು ಆಳ್ವಾಸ್ ಆನಂದಮಯ ಆರೋಗ್ಯಧಾಮ ಸಹಭಾಗಿತ್ವದಲ್ಲಿ ಉಚಿತ ಆರೋಗ್ಯ ಶಿಬಿರ ಭಾನುವಾರ ನಡೆಯಿತು.

ಮೂಡುಬಿದಿರೆ ಶ್ರೀ ವೆಂಕಟರಮಣ ಮತ್ತು ಶ್ರೀ ಹನುಮಂತ ದೇವಸ್ಥಾನದ ಮೊಕ್ತೇಸರ ಎಂ ದಯಾನಂದ ಪೈ ಉದ್ಘಾಟಿಸಿದರು.

ಮೂಡುಬಿದಿರೆ ಶ್ರೀ ವೆಂಕಟರಮಣ ದೇವಸ್ಥಾನದ ಮೊಕ್ತೇಸರ ರಘುವೀರ ಶೆಣೈ ಅಧ್ಯಕ್ಷತೆ ವಹಿಸಿದ್ದರು. ಶ್ರೀರಾಮ ಭಜನಾ ಮಂಡಳಿಯ ಅಧ್ಯಕ್ಷ ರಾಜೇಶ್ ಕಾಮತ್, ಮೂಡುಬಿದಿರೆಯ ವಾಸ್ತು ತಜ್ಞ ಎಂ ರಾಘವೇಂದ್ರ ಭಂಡಾರ್ಕರ್‌ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಾಲೇಜಿನ ವೈದ್ಯೆ ಅಸೋಸಿಯೇಟ್ ಪ್ರೊಫೆಸರ್ ಮತ್ತು ಮೆಡಿಕಲ್ ಆಫೀಸರ್ ಡಾ ಸ್ವಾತಿ ಕೆ.ವಿ. ಹಾಜರಿದ್ದರು.

ಸ್ಥಳೀಯ ಪ್ರತಿಭೆ ಡಾ.ಶ್ರೀನಿವಾಸ ಶೆಣೈ ಮಾತನಾಡಿ, ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಚಿಕಿತ್ಸೆಯಲ್ಲಿನ ರೋಗ ನಿರೋಧಕ ಶಕ್ತಿ ಹಾಗೂ ಈ ಚಿಕಿತ್ಸೆ ಮೂಲಕ ಯಾವುದೇ ಕಾಯಿಲೆಯನ್ನು ಹತೋಟಿಯಲ್ಲಿಡುವುದರ ಜೊತೆಗೆ ಸಂಪೂರ್ಣವಾಗಿ ಗುಣಪಡಿಸುವ ಶಕ್ತಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯಲ್ಲಿದೆ ಎಂದರು.

ವೈದ್ಯಕೀಯ ವಿದ್ಯಾರ್ಥಿನಿ ಭೂಮಿಕಾ ಟಿ ಮನೆಕೋಟಿ ಸ್ವಾಗತಿಸಿದರು. ಗಣ್ಯರಾದ ಕೃಷ್ಣ ಶೆಣೈ , ನಿರ್ಮಲಾ ಆರ್ ಕಾಮತ್ ವಿವೇಕ ಪ್ರಭು, ವಿಠ್ಠಲ ಪ್ರಭು, ನಿತಿನ್ ಕಾಮತ್, ಪ್ರದ್ಯೋತ್ ಪ್ರಭು, ಸುಕುಮಾರ ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಸುನಂದಾ ಮಾಧವ ಪ್ರಭು ಸಭಾಭವನದ ಮಾಲಕರಾದ ವಿಶ್ವನಾಥ ಪ್ರಭು ಸಭಾಭವನ ಉಚಿತವಾಗಿ ನೀಡಿ ಸಹಕರಿಸಿದರು.

ಧಾರ್ಮಿಕ ವಿಶೇಷ ಭಕ್ತ ಸಮಾರಾಧನೆ ಉತ್ಸವದಲ್ಲಿ ತುಲಾಭಾರ ಸೇವೆ, ಮಹಾಮಂಗಳಾರತಿ, ಮಹಾಪೂಜೆ,

ನೆಲಜಿ ಇಗ್ಗುತ್ತಪ್ಪ ದೇವರ ಭಕ್ತ ಸಮಾರಾಧನೆ ವಾರ್ಷಿಕ ಉತ್ಸವ

• **ಕನ್ನಡಪ್ರಭ ವಾರ್ತೆ** ನಾಪೋಕ್ಲು

ನೆಲಜಿ ಗ್ರಾಮದ ಶ್ರೀ ಇಗ್ಗುತ್ತಪ್ಪ ದೇವರ ಭಕ್ತ ಸಮಾರಾಧನೆ ವಾರ್ಷಿಕ ಉತ್ಸವ ಶ್ರದ್ಧಾ ಭಕ್ತಿ ಹಾಗೂ ವಿಜೃಂಭಣೆಯಿಂದ ನಡೆಯಿತು.

ದೇವಾಲಯದ ಭಕ್ತ ಜನ ಸಂಘದ ವತಿಯಿಂದ ಪ್ರತಿ ವರ್ಷ ನಡೆಸುವ ಭಕ್ತ ಸಮಾರಾಧನೆ ಉತ್ಸವದಲ್ಲಿ ತುಲಾಭಾರ ಸೇವೆ, ಮಹಾಮಂಗಳಾರತಿ, ಮಹಾಪೂಜೆ, ಬಲಿ ಹಾಗೂ ಅನ್ನಸಂತರ್ಪಣೆ ನಡೆಯಿತು. ಉತ್ಸವದಲ್ಲಿ 16 ತುಲಾಭಾರ ಸೇವೆಗಳು ಜರುಗಿದವು ಭಕ್ತರು ಕಾಫಿ, ಕಾಳು ಮೆಣಸು ಮತ್ತು ಇತರ ಧಾನ್ಯಗಳನ್ನು ದೇವಾಲಯಕ್ಕೆ ಉದಾರವಾಗಿ ನೀಡಿದರು.

ಇದಕ್ಕೂ ಮೊದಲು ಭಕ್ತ ಜನ ಸಂಘದ ವಾರ್ಷಿಕ ಮಹಾಸಭೆಯ ದೇವಾಲಯದ ಆವರಣದಲ್ಲಿ ಆಯೋಜಿಸಲಾಯಿತು. ಸಂಘದ ಅಧ್ಯಕ್ಷ ಮುಕ್ಕಾಟಿರ ವಿನಯ್ ಅವರ ಅಧ್ಯಕ್ಷತೆಯಲ್ಲಿ ಜರಗಿದ್ದ ಕಾರ್ಯಕ್ರಮದಲ್ಲಿ ನಿವೃತ್ತ ಲೋಕೋಪಯೋಗಿ ಇಲಾಖೆಯ ಜ್ಯೂನಿಯರ್‌ಎಂಜಿನಿಯರ್ ಮೊಣ್ಣಂಡ ಡಿ. ಸೋಮಯ್ಯ, ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಮುಂಡಂಡ ಸಿ. ನಾಣಯ್ಯ, ಭಕ್ತ ಜನ ಸಂಘದ ಕಾರ್ಯದರ್ಶಿ ಸಿ. ಈರಪ್ಪ, ಸಮಿತಿ ಸದಸ್ಯರು, ತಕ್ಕ ಮುಖ್ಯಸ್ಥರಾದ ಬದಂಚೆಟ್ಟಿರ ಬಿ. ನಾಣಯ್ಯ, ನಾಪನೆರವಂಡ ಸಿ.ಪೊನ್ನಪ್ಪ, ಕೈಯಂದಿರ ರಮೇಶ್ ಉತ್ತಯ್ಯ, ಬಾಲೆಯಡ ಕುಂಞಪ್ಪ ಪಾಲ್ಗೊಂಡಿದ್ದರು.

ಮನಿಯಪಂಡ ಪಾರ್ವತಿ ಪ್ರಾರ್ಥನೆಗೆ ಸಭೆಯಲ್ಲಿ ಬಾಲೆಯಡ ಬೆಳ್ಯಪ್ಪ ಲೆಕ್ಕಪತ್ರ ಮಂಡಿಸಿದರು. ಸಭೆಯಲ್ಲಿ ಭಕ್ತ ಜನ ಸಂಘದ ಕಾರ್ಯವೈಖರಿ ಬಗ್ಗೆ, ದೇವಸ್ಥಾನದ ಅಭಿವೃದ್ಧಿ ಬಗ್ಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಯಿತು.



ನೆಲಜಿ ಗ್ರಾಮದ ಶ್ರೀ ಇಗ್ಗುತ್ತಪ್ಪ ದೇವರ ಭಕ್ತ ಸಮಾರಾಧನೆ ಉತ್ಸವದಲ್ಲಿ ದೇವರ ನೃತ್ಯ ಬಲಿ ಶ್ರದ್ಧಾ ಭಕ್ತಿಯಿಂದ ಜರುಗಿತು.

■ ನೆಲಜಿ ಗ್ರಾಮದ ಶ್ರೀ ಇಗ್ಗುತ್ತಪ್ಪ ದೇವರ ಭಕ್ತ ಸಮಾರಾಧನೆ ವಾರ್ಷಿಕ ಉತ್ಸವ ಶ್ರದ್ಧಾ ಭಕ್ತಿ ಹಾಗೂ ವಿಜೃಂಭಣೆಯಿಂದ ನಡೆಯಿತು.

■ ಉತ್ಸವದಲ್ಲಿ 16 ತುಲಾಭಾರ ಸೇವೆಗಳು ಜರುಗಿದವು ಭಕ್ತರು ಕಾಫಿ, ಕಾಳು ಮೆಣಸು ಮತ್ತು ಇತರ ಧಾನ್ಯಗಳನ್ನು ದೇವಾಲಯಕ್ಕೆ ಉದಾರವಾಗಿ ನೀಡಿದರು.

ಗ್ರಾ. ಪಂಚಾಯಿತಿ ಅಭಿವೃದ್ಧಿಗೆ ಅಧಿಕಾರ ಚಲಾಯಿಸಿ: ಡಿ.ಆರ್. ಪಾಟೀಲ ಸಲಹೆ

ವಾರ್ಷಿಕ ಕರಡು ಅಭಿವೃದ್ಧಿ ಯೋಜನೆ ತಯಾರಿ ಮಾಹಿತಿ ಸಂಗ್ರಹ



• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳಾಗಿದ್ದು, ಆ ದಿಸೆಯಲ್ಲಿ ಗ್ರಾಪಗಳಿಗೆ ಸರ್ಕಾರ ಹೆಚ್ಚಿನ ಅಧಿಕಾರ ನೀಡಿದ್ದು, ಅದನ್ನು ನಿಯಮಾನುಸಾರ ಬಳಸುವಂತಾಗಬೇಕು ಎಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ತಾಲೂಕಿನ ಹೊದ್ದೂರು ಗ್ರಾಪಂ ಸಭಾಂಗಣದಲ್ಲಿ 2026-27ನೇ ಸಾಲಿನ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆ ತಯಾರಿ ಬಗ್ಗೆ ಮಾಹಿತಿ ಪಡೆದು ಮಾತನಾಡಿದರು.

ಗ್ರಾಪಂ ಅಭಿವೃದ್ಧಿಗೆ ಕಾನೂನಿನ ಅಧಿಕಾರ ಚಲಾಯಿಸಬೇಕು. ಸಂವಿಧಾನದ ಆಶಯದಂತೆ ನಡೆದುಕೊಳ್ಳಬೇಕು. ಪಂಚಾಯತ್ ರಾಜ್ ವ್ಯವಸ್ಥೆ ಬಲಿಷ್ಠವಾಗಿರಬೇಕು. ಆ ಮೂಲಕ ಗ್ರಾಮಗಳ ಅಭಿವೃದ್ಧಿ ಆಗಬೇಕು ಎಂದು ಹೇಳಿದರು.

ಜನರ ಪ್ರತಿನಿಧಿಗಳು ಜನರೇ ಆಗಿದ್ದಾರೆ. ಆದ್ದರಿಂದ ಸ್ಥಳೀಯವಾಗಿಯೇ ಶಾಲೆ, ಆಸ್ಪತ್ರೆ, ಅಂಗನವಾಡಿ ಮತ್ತಿತರ ಅಗತ್ಯ ಹುದ್ದೆಗಳ ನೇಮಕವೂ ಆಗಬೇಕು ಎಂದು ಸಲಹೆ ಮಾಡಿದರು. ಕಾನೂನಿನ ಅಧಿಕಾರ ಹಸ್ತಾಂತರ ಆಗಬೇಕು. ಗ್ರಾಮ ಸಭೆಯ ನಿರ್ಣಯವೇ ಅಂತಿಮ ಆಗಬೇಕು. ಗ್ರಾಮ ಅಭಿವೃದ್ಧಿಗೆ ಸ್ಥಳೀಯರೇ ಚಿಂತಿಸಬೇಕು ಎಂದು ವಿವರಿಸಿದರು. ಗ್ರಾಪಂ ವ್ಯವಸ್ಥೆಯಲ್ಲಿ ಪಕ್ಷ ರಾಜಕಾರಣ ಇರುವುದಿಲ್ಲ. ಆದ್ದರಿಂದ ಗ್ರಾಮಸ್ಥರೇ ಎಲ್ಲ ಬಡ ಜನರ ಏಳ್ಗೆಯನ್ನು ಬಯಸಿ ಒಮ್ಮತದ ತೀರ್ಮಾನ ತೆಗೆದುಕೊಳ್ಳಬಹುದಾಗಿದೆ ಎಂದರು.

ಗ್ರಾಪಂಗಳಿಗೆ ಇರುವ ಅಧಿಕಾರ ಮತ್ತು ಕಾನೂನಿನ ಬಗ್ಗೆ ಕೈಪಿಡಿ ಮುದ್ರಿಸಿ ನೀಡುವಂತಾಗಬೇಕು ಎಂದು ಸಲಹೆ ನೀಡಿ, ಮಹಾತ್ಮ ಗಾಂಧಿಯವರ ಕನಸಿನ ರಾಮ ರಾಜ್ಯ ಮತ್ತು ರಾಜೀವ್ ಗಾಂಧಿ ಅವರ ಗ್ರಾಮೀಣಾಭಿವೃದ್ಧಿ, ಸಾಮಾಜಿಕ ನ್ಯಾಯ ಮತ್ತು ಆಧುನಿಕ ತಂತ್ರಜ್ಞಾನದ ಆಶಯದೊಂದಿಗೆ ಗ್ರಾಮಗಳ ಅಭಿವೃದ್ಧಿ ಮತ್ತಷ್ಟು ಆಗಬೇಕು ಎಂದು ಹೇಳಿದರು.

ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ವಿಶೇಷ ಸಲಹೆಗಾರರಾದ ಕೆಂಪೇಗೌಡ ಅವರು ಮಾತನಾಡಿ, ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಚುನಾಯಿತ ಸರ್ಕಾರ ಇರಬೇಕು ಎಂಬುದು ಸರ್ಕಾರದ ಆಶಯವಾಗಿದ್ದು, ಆ ನಿಟ್ಟಿನಲ್ಲಿ ಸ್ಥಳೀಯ ಆಡಳಿತಕ್ಕೆ ವಿಶೇಷವಾದ ಅಧಿಕಾರ ನೀಡಲಾಗಿದೆ ಎಂದರು.

2027-28ನೇ ಸಾಲಿನಲ್ಲಿ ಜನರ ಯೋಜನೆಯಾಗಿ ರೂಪಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿಂತನೆ ನಡೆಸಿದ್ದು, ಅದರಂತೆ ಜನರ ಭಾಗವಹಿಸುವಿಕೆ ಅತಿ ಮುಖ್ಯ ಎಂದು ಕೆಂಪೇಗೌಡ ವಿವರಿಸಿದರು.

ಗ್ರಾಪಂ ನಿಕಟಪೂರ್ವ ಸದಸ್ಯ ಮೊಣ್ಣಪ್ಪ ಮಾತನಾಡಿ ಗ್ರಾಪಂಗಳಿಗೆ ಅನುದಾನ ಹೆಚ್ಚಿಸಬೇಕು ಎಂದು ಕೋರಿದರು. ಗ್ರಾಪಂ ನಿಕಟಪೂರ್ವ ಅಧ್ಯಕ್ಷರಾದ ಹಂಸ ಮಾತನಾಡಿ, ಗ್ರಾಮೀಣ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯ. ಆ ನಿಟ್ಟಿನಲ್ಲಿ ಸರ್ಕಾರ ಮತ್ತು ಸ್ಥಳೀಯ ಆಡಳಿತ ಸಮನ್ವಯತೆ ಮತ್ತು ದೂರದೃಷ್ಟಿಯಿಂದ ಕಾರ್ಯನಿರ್ವಹಣೆ ಅಗತ್ಯ ಎಂದರು.

ಗ್ರಾಪಂ ಮಾಜಿ ಸದಸ್ಯರಾದ ಕುಸುಮಾವತಿ, ಹಮೀದ್, ಲಕ್ಷ್ಮಿ, ಜಿಪಂ ಸಹಾಯಕ ಕಾರ್ಯದರ್ಶಿ ಅಬ್ದುಲ್ ನಬಿ, ತಾಪಂ ಇಒ ಶೇಖರ್, ಆಡಳಿತಾಧಿಕಾರಿ ಪಿ.ಪಿ. ಕವಿತಾ, ಪಿಡಿಒ ವತ್ಸಲಾ, ಅಬ್ದುಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳು, ಸ್ಥಳೀಯರು ಇದ್ದರು.